<u>ಕರ್ನಾಟಕ ಸರ್ಕಾರದ ನಡವಳಿ</u>

**ವಿಷಯ**: 7ನೇ ರಾಜ್ಯ ವೇತನ ಆಯೋಗಕ್ಕೆ ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:** 1) ದಿನಾಂಕ: 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022
2) ದಿನಾಂಕ: 28-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022

ಪ್ರಸ್ತಾವನೆ:

ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು ರೂಪಿಸಲು, ಈ ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ದಿನಾಂಕ:19-11-2022ರ ಸರ್ಕಾರಿ ಆದೇಶದಲ್ಲಿ ಅಧ್ಯಕ್ಷರನ್ನೂ ಒಳಗೊಂಡಂತೆ ತ್ರಿಸದಸ್ಯ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 28-11-2022ರ ಸರ್ಕಾರಿ ಆದೇಶದಲ್ಲಿ 7ನೇ ರಾಜ್ಯ ವೇತನ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸಲಾಗಿರುತ್ತದೆ.

ದಿನಾಂಕ:19-11-2022ರ ಸರ್ಕಾರಿ ಆದೇಶದಲ್ಲಿ ರಚಿಸಲಾದ 7ನೇ ರಾಜ್ಯ ವೇತನ ಆಯೋಗದ ಕಾರ್ಯನಿರ್ವಹಣೆಗೆ ಪೂರಕವಾಗಿ ಹೊಸ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಆಇ 46 ಎಸ್.ಆರ್.ಪಿ 2022,</u>**
**<u>ಬೆಂಗಳೂರು, ದಿನಾಂಕ: 1ನೇ ಡಿಸೆಂಬರ್ 2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಿನಾಂಕ: 19-11-2022ರ ಸರ್ಕಾರಿ ಆದೇಶದಲ್ಲಿ ರಚಿಸಿರುವ 7ನೇ ರಾಜ್ಯ ವೇತನ ಆಯೋಗಕ್ಕೆ ಈ ಕೆಳಕಂಡ 44 (ನಲವತ್ನಾಲ್ಕು) ಹುದ್ದೆಗಳನ್ನು ಸೃಜಿಸಲು ಸರ್ಕಾರವು ಮಂಜೂರಾತಿ ನೀಡಿದೆ.

| ಕ್ರಮ ಸಂಖ್ಯೆ | ಹುದ್ದೆಗಳು | ಹುದ್ದೆಗಳ ಸಂಖ್ಯೆ |
|---|---|---|
| 1 | ಕಾರ್ಯದರ್ಶಿ (ಐ.ಎ.ಎಸ್.ವೃಂದ) | 1 |
| 2 | ಅಪರ / ಜಂಟಿ / ಉಪ ಕಾರ್ಯದರ್ಶಿ / ವಿಶೇಷಾಧಿಕಾರಿ | 3 |

| | | |
|---|---|---|
| 3 | ಜಂಟಿ / ಉಪ / ಸಹಾಯಕ ನಿರ್ದೇಶಕರು (ಅಂಕಿಅಂಶ) | 1 |
| 4 | ಅಧೀನ ಕಾರ್ಯದರ್ಶಿ / ಆಪ್ತ ಕಾರ್ಯದರ್ಶಿ | 6 |
| 5 | ಶಾಖಾಧಿಕಾರಿ | 2 |
| 6 | ಹಿರಿಯ ಸಹಾಯಕರು / ಸಹಾಯಕರು / ಶೀಘ್ರಲಿಪಿಗಾರರು / ಕಿರಿಯ ಸಹಾಯಕರು / ಬೆರಳಚ್ಚುಗಾರರು / ಡಾಟಾ ಎಂಟ್ರಿ ಆಪರೇಟರ್ ಹಾಗೂ ಇತರೆ ಗ್ರೂಪ್ ಸಿ ವೃಂದದ ಹುದ್ದೆಗಳು | 25 |
| 7 | ದಲಾಯತ್ | 6 |
| | ಒಟ್ಟು | 44 |

2) ವೇತನ ಆಯೋಗವು ಶೀಘ್ರದಲ್ಲಿ ಕಾರ್ಯಾರಂಭ ಮಾಡುವುದಕ್ಕೆ ಅನುಕೂಲವಾಗುವಂತೆ ಮೇಲ್ಕಂಡ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

3) ಸುಲಭವಾಗಿ ಹೊಂದಿಕೊಳ್ಳುವ ಮತ್ತು ಕಾರ್ಯ ನಿರ್ವಹಣೆಯಲ್ಲಿ ಅಂತರ್ ವಿನಿಮಯತೆಯ ದೃಷ್ಟಿಯಿಂದ ಅಪರ / ಜಂಟಿ / ಉಪ ಕಾರ್ಯದರ್ಶಿ / ವಿಶೇಷಾಧಿಕಾರಿ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಗ್ರೂಪ್-ಸಿ ವೃಂದದ ಹುದ್ದೆಗಳನ್ನು ಒಟ್ಟಾರೆ ಸೃಜಿಸಲಾಗಿದ್ದು, ವೇತನ ಆಯೋಗವು ಅಗತ್ಯವಿರುವ ಸಿಬ್ಬಂದಿಗಳನ್ನು ನೇಮಿಸಿಕೊಳ್ಳುವ ಸ್ವಾತಂತ್ರವನ್ನು ಕಲ್ಪಿಸಲಾಗಿರುತ್ತದೆ.

4) 7ನೇ ರಾಜ್ಯ ವೇತನ ಆಯೋಗದ ವೆಚ್ಚವನ್ನು ಲೆಕ್ಕ ಶೀರ್ಷಿಕೆ: "2052-00-092-0-07 ಕರ್ನಾಟಕ ವೇತನ ಆಯೋಗ" ರಡಿಯಲ್ಲಿ ಭರಿಸತಕ್ಕದ್ದು.

5) ಲೆಕ್ಕ ಶೀರ್ಷಿಕೆ "2052-00-092-0-07 ಕರ್ನಾಟಕ ವೇತನ ಆಯೋಗ" ಇದಕ್ಕೆ ಸಂಬಂಧಿಸಿದಂತೆ, ಉಪ ಕಾರ್ಯದರ್ಶಿ, 7ನೇ ರಾಜ್ಯ ವೇತನ ಆಯೋಗ, ಇವರು ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಯನ್ನಾಗಿ (DDO) ಪ್ರಾಧೀಕರಿಸಲಾಗಿದೆ.

6) 7ನೇ ರಾಜ್ಯ ವೇತನ ಆಯೋಗಕ್ಕೆ ಸೃಜಿಸಲಾದ ಈ ಮೇಲಿನ ಹುದ್ದೆಗಳನ್ನು ಆಯೋಗದ ಅವಧಿಯುವರೆಗೆ ತಾತ್ಕಾಲಿಕವಾಗಿ ಸೃಜನೆ ಮಾಡಲಾಗಿರುತ್ತದೆ. ಸೃಜಿಸಲಾದ ಹುದ್ದೆಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಕರ್ನಾಟಕ ಸರ್ಕಾರದ ಸಚಿವಾಲಯದ ಸೇವೆಯಿಂದ ಅಥವಾ ಸರ್ಕಾರದ ಇನ್ನಿತರೆ ಇಲಾಖೆಗಳಿಂದ ನಿಯೋಜನೆ ಮೇಲೆ ಭರ್ತಿ ಮಾಡತಕ್ಕದ್ದು.

7) ಈ ಆದೇಶವನ್ನು ಟಿಪ್ಪಣಿ ಸಂಖ್ಯೆ: DPAR 452 PSS 2022 ದಿನಾಂಕ 24-11-2022ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನೀಡಿದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Uma K
(ಉಮಾ ಕೆ.)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2).
1/12

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
6. ಅಧ್ಯಕ್ಷರು / ಸದಸ್ಯರು, 7ನೇ ರಾಜ್ಯ ವೇತನ ಆಯೋಗ, ಬೆಂಗಳೂರು
7. ಕಾರ್ಯದರ್ಶಿ, 7ನೇ ರಾಜ್ಯ ವೇತನ ಆಯೋಗ, ಬೆಂಗಳೂರು
8. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು) / (ಸಿಬ್ಬಂದಿ) / (ಆಡಳಿತ) / (ಲೆಕ್ಕಪತ್ರ) / ಕಾರ್ಯಕಾರಿ
10. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ / ವಿಧಾನ ಮಂಡಲದ ಗ್ರಂಥಾಲಯ.
11. ವಾರಪತ್ರ / ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ w.w.w.finance.karnataka.gov.in ವೀಕ್ಷಿಸಿ.**